ಜಿಲ್ಲಾಧಿಕಾರಿಯವರ ಕಾರ್ಯಾಲಯ,
ಜಿಲ್ಲಾ ನಗರಾಭಿವೃದ್ಧಿ ಕೋಶ,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಕರ್ನಾಟಕ ಸರಕಾರ

ದೂರವಾಣಿ ಸಂ: 22862850
Email: dudc_blr@yahoo.co.in
itstaff_dudc_blr@yahoo.com
ಪೋಡಿಯಂ ಬ್ಲಾಕ್, ವಿ.ವಿ.ಟವರ್,
ಬೆಂಗಳೂರು- 560001

## ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ನಗರಾಭಿವೃದ್ಧಿ ಕೋಶ, ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಸಂಖ್ಯೆ: ಜಿನಕೋ(1)/ಸಿಆರ್/ಸಿಬ್ಬಂದಿ/36/2017-18 ದಿನಾಂಕ:09.03.2018

## ಅಧಿಸೂಚನೆ

**ವಿಷಯ:** ಕರ್ನಾಟಕ ಪುರಸಭೆಗಳ (ರಾಜ್ಯದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿನ ಪೌರಕಾರ್ಮಿಕರ ನೇಮಕಾತಿ(ವಿಶೇಷ) ನಿಯಮಗಳು-2017ರ ರೀತ್ಯಾ ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ನಂ:ನಅಇ:126:ಟಿಎಂಎಸ್:2016, ಬೆಂಗಳೂರು ದಿನಾಂಕ:04.12.2017.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳ ನಗರಾಭಿವೃದ್ಧಿ ಇಲಾಖೆ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಜರುಗಿದ ನಡುವಳಿ ದಿನಾಂಕ:15.12.2017.
3. ಸರ್ಕಾರದ ಪತ್ರ ಸಂ:ನಅಇ:150 ಟಿಎಂಎಸ್ 2017, ದಿನಾಂಕ:24.01.2018.
4. ಕರ್ನಾಟಕ ಪುರಸಭೆಗಳ (ಅಧಿಕಾರಿ ಮತ್ತು ಸಿಬ್ಬಂದಿಗಳ ನೇಮಕಾತಿ) ನಿಯಮಗಳು-2010.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಪುರಸಭೆಯಲ್ಲಿ ಖಾಲಿ ಇರುವ ಈ ಕೆಳಕಂಡ ಪೌರಕಾರ್ಮಿಕರ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಅಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಪೋಡಿಯಂ ಬ್ಲಾಕ್, 1ನೇ ಮಹಡಿ, ಬೆಂಗಳೂರು-560001. ಅಥವಾ ನೆಲಮಂಗಲ ಪುರಸಭೆಯಲ್ಲಿ ಪಡೆಯಬಹುದು. ಇಚ್ಛೆಯುಳ್ಳ ಅಭ್ಯರ್ಥಿಗಳು ಎಲ್ಲಾ ಅಂಕಣಗಳನ್ನು ಭರ್ತಿ ಮಾಡಿ ಮುಖ್ಯಾಧಿಕಾರಿ, ಪುರಸಭೆ ನೆಲಮಂಗಲ ರವರಿಂದ ದೃಢೀಕರಿಸಿ ಪ್ರತಿಗಳನ್ನು ಲಗತ್ತಿಸಿ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಪೋಡಿಯಂ ಬ್ಲಾಕ್, 1ನೇ ಮಹಡಿ, ಬೆಂಗಳೂರು-560001. ಇಲ್ಲಿ ದಿನಾಂಕ:31.03.2018ರ ಸಂಜೆ 5.30ರೊಳಗೆ ಸಲ್ಲಿಸತಕ್ಕದ್ದು.

**ಸೂಚನೆ:**

1. ಅರ್ಜಿಯು ಕಡ್ಡಾಯವಾಗಿ ನಿಗಧಿತ ನಮೂನೆಯಲ್ಲಿಯೇ ಇರಬೇಕು.
2. ಅರ್ಜಿಯನ್ನು ಸಂಬಂಧಿಸಿದ ಆಯಾ ನಗರ ಸ್ಥಳೀಯ ಸಂಸ್ಥೆಗಳಿಂದ ಹಾಗೂ ಈ ಕಾರ್ಯಾಲಯದಿಂದ ತೆಗೆದುಕೊಂಡು ಅರ್ಜಿ ಸಲ್ಲಿಸಬಹುದು.
3. ಕ್ಷೇಮಾಭಿವೃದ್ಧಿ, ದಿನಗೂಲಿ, ಗುತ್ತಿಗೆ, ಹೊರಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ ಮತ್ತು ಇತರೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನೌಕರರು ಅರ್ಜಿಯನ್ನು ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳೀಯ ಸಂಸ್ಥೆಯಲ್ಲಿಯೇ ಸಲ್ಲಿಸತಕ್ಕದ್ದು. ಬೇರೆ ಯಾವುದೇ ಸ್ಥಳೀಯ ಸಂಸ್ಥೆಗಳಿಗೆ ಅರ್ಜಿಯನ್ನು ಸಲ್ಲಿಸಿದ್ದಲ್ಲಿ ಪರಿಗಣಿಸಲಾಗುವುದಿಲ್ಲ.
4. ಹೆಚ್ಚಿನ ಮಾಹಿತಿ ಹಾಗೂ ವಿವರವಾದ ಅಧಿಸೂಚನೆಯನ್ನು ಆಯಾ ನಗರಸಭೆ/ಪುರಸಭೆಗಳಲ್ಲಿಯೂ ಸಹ ಪಡೆಯಬಹುದು.

5. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಯ ಷರತ್ತುಗಳಿಗೆ ಒಳಪಟ್ಟಿರುತ್ತದೆ.

## ಪುರಸಭೆ ನೆಲಮಂಗಲ

| ಅ.ನಂ | ಹುದ್ದೆಯ ಹೆಸರು ವೇತನ ಶ್ರೇಣಿ | ಒಟ್ಟು ಹುದ್ದೆ | ಕನಿಷ್ಠ ವಿದ್ಯಾರ್ಹತೆ / ಅರ್ಹತೆ |
|---|---|---|---|
| 1 | ಪೌರಕಾರ್ಮಿಕರು 9600-14550 | 48 | 1. ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2. ಕನಡ ಮಾತನಾಡಲು ಗೊತ್ತಿರಬೇಕು.<br>3. ಪೌರ ಕಾರ್ಮಿಕ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ಕ್ಷೇಮಾಭಿವೃದ್ಧಿ, ದಿನಗೂಲಿ, ಗುತ್ತಿಗೆ, ಹೊರಗುತ್ತಿಗೆ, ಸಮಾನ ಕೆಲಸಕ್ಕೆ ಸಮಾನ ವೇತನ ನೌಕರರು ಮಾತ್ರ<br>4. ಗರಿಷ್ಠ ವಯೋಮಿತಿ 45 ವರ್ಷ |

**ಪೌರಕಾರ್ಮಿಕರ ಹುದ್ದೆಗಳ ಸಂಖ್ಯೆ-48** **ಮೀಸಲಾತಿ ವಿವರ**

| ಕ್ರ.ಸಂ | ವರ್ಗೀಕರಣದ ವಿವರ | ಇತರೆ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1 | ಪರಿಶಿಷ್ಟ ಜಾತಿ | 02 | 02 | 02 | 01 | - | - | - | 07 |
| 2 | ಪ.ಪಂಗಡ | 01 | 01 | - | - | - | - | - | 02 |
| 3 | ಪ್ರವರ್ಗ-1 | 01 | 01 | - | - | - | - | - | 02 |
| 4 | ಪ್ರವರ್ಗ-2ಎ | 02 | 02 | 02 | 01 | - | - | - | 07 |
| 5 | ಪ್ರವರ್ಗ-2ಬಿ | 01 | 01 | - | - | - | - | - | 02 |
| 6 | ಪ್ರವರ್ಗ-3ಎ | 01 | 01 | - | - | - | - | - | 02 |
| 7 | ಪ್ರವರ್ಗ-3ಬಿ | 01 | 01 | - | - | - | - | - | 02 |
| 8 | ಸಾಮಾನ್ಯ | 05 | 07 | 06 | 02 | 02 | 01 | 01 | 24 |
| ಒಟ್ಟು | | 14 | 16 | 10 | 04 | 02 | 01 | 01 | 48 |

**ನೇಮಕಾತಿ ವಿಧಾನ:** ಕರ್ನಾಟಕ ಪುರಸಭೆಗಳ (ರಾಜ್ಯದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿನ ಪೌರಕಾರ್ಮಿಕರ ನೇಮಕಾತಿ(ವಿಶೇಷ) ನಿಯಮಗಳು-2017ರ ರೀತ್ಯಾ ನೇಮಕಾತಿ ಅಭ್ಯರ್ಥಿಗಳ ಆಯ್ಕೆಯನ್ನು ಮಾಡಲಾಗುವುದು.

1. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಅನ್ಯ ಸ್ಥಳೀಯ ಸಂಸ್ಥೆಯ ಅಭ್ಯರ್ಥಿಗಳು ಆಗಿರಬಾರದು.
2. ಕ್ಷೇಮಾಭಿವೃದ್ಧಿ ಅಂದರೆ, ಕರ್ನಾಟಕ ರಾಜ್ಯ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012ರ ರೀತ್ಯಾ, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರು.
3. ವಯೋಮಿತಿ (1) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮಗಳು ಅಥವಾ ಕರ್ನಾಟಕ ಪುರಸಭೆ (ಅಧಿಕಾರಿ/ನೌಕರರ ನೇಮಕಾತಿ) ನಿಯಮಗಳೂ 2010ರ ನಿಯಮಗಳಲ್ಲಿ ಏನೇ ಹೇಳಿದ್ದರೂ, ಗರಿಷ್ಠ ವಯೋಮಿತಿ 45 ವರ್ಷಗಳು.

4. ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ / ವಿದ್ಯಾರ್ಹತೆ ದಾಖಲಾತಿಗಳು / ಆಧಾರ್ ಕಾರ್ಡ್ / ಮತದಾರರ ಗುರುತಿನ ಚೀಟಿ ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.

5. ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಹಾಲಿ ಕ್ಷೇಮಾಭಿವೃದ್ಧಿ / ದಿನಗೂಲಿ / ಗುತ್ತಿಗೆ / ಹೊರಗುತ್ತಿಗೆ / ಸಮಾನ ಕೆಲಸಕ್ಕೆ ಸಮಾನ ವೇತನ / ಇತರೆ ಆಧಾರದ ಮೇಲೆ 2 ವರ್ಷಕ್ಕಿಂತ ಕಡಿಮೆ ಇಲ್ಲದೆ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ಹಾಗೂ ಈ ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆದ್ಯತೆ ನೀಡಲಾಗುವುದು.

6. ಕಡಿಮೆ ವರ್ಷ ಸೇವೆ ಸಲ್ಲಿಸಿರುವವರಿಗಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರಿಗೆ ಆದ್ಯತೆ ನೀಡಲಾಗುವುದು.

7. ನೇಮಕಾತಿಯಲ್ಲಿನ ಆದ್ಯತೆಯನ್ನು ಕ್ಷೇಮಾಭಿವೃದ್ಧಿ / ದಿನಗೂಲಿ / ಗುತ್ತಿಗೆ / ಹೊರಗುತ್ತಿಗೆ / ಇತರೆ ಆಧಾರದ ಮೇಲೆ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಕ್ರಮವಾಗಿ ಪರಿಗಣಿಸಲಾಗುವುದು.

8. ಹೊರಗುತ್ತಿಗೆ ಪೌರಕಾರ್ಮಿಕರಿಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್), ಹಾಜರಾತಿ ಮತ್ತು ವೇತನ ಪಡೆದ 2 ವರ್ಷಗಳ ದಾಖಲಾತಿಗಳನ್ನು ಪರಿಗಣಿಸಲಾಗುವುದು.

9. ಕ್ಷೇಮಾಭಿವೃದ್ಧಿ / ದಿನಗೂಲಿ / ಸಮಾನ ಕೆಲಸಕ್ಕೆ ಸಮಾನ ವೇತನ / ಗುತ್ತಿಗೆ / ಇತರೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ 2 ವರ್ಷಗಳ ಮೇಲ್ಪಟ್ಟು ನಗರ ಸ್ಥಳೀಯ ಸಂಸ್ಥೆಗಳಿಂದ ವೇತನ ಪಡೆದ ದಾಖಲಾತಿಗಳನ್ನು ನೇಮಕಾತಿಯಲ್ಲಿ ಆಧ್ಯತೆಗೆ ಪರಿಗಣಿಸಲಾಗುವುದು.

10. ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳ ಜೇಷ್ಠತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು. ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಆಯ್ಕೆ ಮಾಡಲಾಗುವುದು.

11. ನೇಮಕಾತಿ ಪ್ರಾಧಿಕಾರಿಯೂ ಆಯ್ಕೆ ಉಪನಿಯಮ(2)ರಂತೆ ಪ್ರತಿಯೊಂದು ಪ್ರವರ್ಗದ ಮೀಸಲಾತಿ (ಸಮತಲ ಮತ್ತು ಲಂಬವಾದ) ಗೆ ಅನುಗುಣವಾಗಿ ಆಯ್ಕೆಯಾಗಬಹುದಾದ ಅಭ್ಯರ್ಥಿಗಳ ಶೇ.20 ರಷ್ಟು ಹೆಚ್ಚುವರಿ ಪಟ್ಟಿ ತಯಾರಿಸಲಾಗುವುದು.

12. ಉಪ ನಿಯಮ (2) ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಅಭ್ಯರ್ಥಿಯಾಗಿರುವ ಮತ್ತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು.

13. ಉಪ ನಿಯಮ (2) ಮತ್ತು (5) ರಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ನಗರಸಭೆಗಳು / ಪುರಸಭೆಗಳು ಮತ್ತು ಪಟ್ಟಣ ಪಂಚಾಯತಿಗಳಲ್ಲಿನ / ಜಿಲ್ಲಾಧಿಕಾರಿಗಳ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ಹಾಗೂ ನಗರಸಭೆ, ಪುರಸಭೆ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಳಿಸಲಾಗುವುದು.

14. ನೇಮಕಾತಿ ಪ್ರಾಧಿಕಾರಿಯು ಆಯ್ಕೆ ಮಾಡಿದ ಅಭ್ಯರ್ಥಿಗಳ ಪಟ್ಟಿಯು ಗುರುತಿಸಲಾದ ಖಾಲಿ ಹುದ್ದೆಗಳು ಭರ್ತಿಯಾಗುವವರೆಗೆ ಅಥವಾ ಆಯ್ಕೆ ಪಟ್ಟಿಯು ಪ್ರಕಟಣೆಯಾದ ಒಂದು ವರ್ಷದ ಅವಧಿಯವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ.

15. ಅಭ್ಯರ್ಥಿಗಳ ನೇಮಕಾತಿಯನ್ನು ನಿಯಮ (4)ರ ರೀತ್ಯಾ ಆಯ್ಕೆ ಪಟ್ಟಿಯಲ್ಲಿ ನಮೂದಿಸಲಾದ ಅಭ್ಯರ್ಥಿಗಳ ಹೆಸರು, ಅವರ ಹೆಸರಿನ ಮುಂದೆ ಖಾಲಿ ಹುದ್ದೆಗಳಿಗನುಸಾರ ಎಲ್ಲಾ ರೀತಿಯಿಂದ ನೇಮಕಾತಿಗೆ ಅರ್ಹರಾಗಿದ್ದಾರೆ ಎಂಬುದನ್ನು ವಿಚಾರಣೆಯ ಮೂಲಕ ಖಚಿತಪಡಿಸಿಕೊಂಡ ನಂತರವೇ ನೇಮಕಾತಿ ಆದೇಶ ನೀಡಲಾಗುವುದು.

16. ನಿಯಮ 4ರ ಉಪನಿಯಮ 6ರಲ್ಲಿ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ.

17. ನೇಮಕಾತಿಗೆ ಪರಿಗಣಿಸಬೇಕಾಗಿರುವ ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಅಧಿಕಾರವು ನೇಮಕಾತಿ ಪ್ರಾಧಿಕಾರಕ್ಕೆ ಒಳಪಟ್ಟಿರುತ್ತದೆ.

18. ಆಯ್ಕೆಯಾಗುವ ಎಲ್ಲಾ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಕರೆದಾಗ ಜಿಲ್ಲಾಧಿಕಾರಿಗಳ ಕಛೇರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

## ಅರ್ಜಿ ಸಲ್ಲಿಸುವ ವಿಧಾನ:

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಈ ಕಾರ್ಯಾಲಯದಿಂದ ಹಾಗೂ ಸಂಬಂಧಿಸಿದ ನಗರಸಭೆ / ಪುರಸಭೆಗಳಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ಪ್ರತಿಗಳನ್ನು ಆಯಾ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ **ದೃಢೀಕರಿಸಿ ಅರ್ಜಿಯೊಂದಿಗೆ** ಲಗತ್ತಿಸಿ ಅರ್ಜಿಯನ್ನು ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಗೆ ದಿನಾಂಕ:31.03.2018 ರೊಳಗೆ ಸಂಜೆ 5.30 ಗಂಟೆಯೊಳಗೆ ತಲುಪುವಂತೆ ಸಲ್ಲಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು ತಾವು ಅರ್ಜಿ ಸಲ್ಲಿಸುವ ಹುದ್ದೆಯ ಹೆಸರನ್ನು ತಪ್ಪದೇ ನಮೂದಿಸುವುದು. ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ.
2. ಅಭ್ಯರ್ಥಿಯ ವಯಸ್ಸನ್ನು ಶೈಕ್ಷಣಿಕ / ವಿದ್ಯಾರ್ಹತೆ ದಾಖಲಾತಿಗಳು / ಆಧಾರ್ ಕಾರ್ಡ್ / ಮತದಾರರ ಗುರುತಿನ ಚೀಟಿ ದಾಖಲಾತಿಗಳನ್ನು ಆಧರಿಸಿ ನಿರ್ಧರಿಸಲಾಗುವುದು.
3. ನಗರ ಸ್ಥಳೀಯ ಸಂಸ್ಥೆಗಳಾದ ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಹಾಲಿ ಕ್ಷೇಮಾಭಿವೃದ್ಧಿ / ದಿನಗೂಲಿ / ಗುತ್ತಿಗೆ / ಹೊರಗುತ್ತಿಗೆ / ಸಮಾನ ಕೆಲಸಕ್ಕೆ ಸಮಾನ ವೇತನ / ಇತರೆ ಆಧಾರದ ಮೇಲೆ 2 ವರ್ಷಕ್ಕಿಂತ ಕಡಿಮೆ ಇಲ್ಲದೆ ನಿರಂತರವಾಗಿ ಕೆಲಸ ನಿರ್ವಹಿಸುತ್ತಿರುವ ದಾಖಲೆ.

4. ಕರ್ನಾಟಕ ಪುರಸಭೆಗಳ (ರಾಜ್ಯದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿನ) ಪೌರಕಾರ್ಮಿಕರ ನೇಮಕಾತಿ (ವಿಶೇಷ) ನಿಯಮಗಳು–2017 ನಿಯಮ ಜಾರಿಗೆ ಬಂದ ದಿನಾಂಕದಲ್ಲಿಯೂ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಪಡೆದ ಸೇವಾ ಪ್ರಮಾಣ ಪತ್ರ ದಾಖಲೆ

5. ಕಡಿಮೆ ವರ್ಷ ಸೇವೆ ಸಲ್ಲಿಸಿರುವವರಿಗಿಂತ ಹೆಚ್ಚು ವರ್ಷ ಸೇವೆ ಸಲ್ಲಿಸಿದವರಿಗೆ ಆದ್ಯತೆ ನೀಡಲಾಗುವುದು. ಈ ಬಗ್ಗೆ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಪಡೆದ ಸೇವಾ ಪ್ರಮಾಣ ಪತ್ರ ಲಗತ್ತಿಸುವುದು.

6. ನೇಮಕಾತಿಯಲ್ಲಿ ಆದ್ಯತೆಯನ್ನು ಕ್ಷೇಮಾಭಿವೃದ್ಧಿ / ದಿನಗೂಲಿ / ಗುತ್ತಿಗೆ / ಹೊರಗುತ್ತಿಗೆ / ಇತರೆ ಆಧಾರದ ಮೇಲೆ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರ ಬಗ್ಗೆ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ಪಡೆದ ಸೇವಾ ಪ್ರಮಾಣ ಪತ್ರ ದಾಖಲೆ ಸಲ್ಲಿಸುವುದು.

7. ಹೊರಗುತ್ತಿಗೆ ಪೌರಕಾರ್ಮಿಕರಿಗೆ ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್), ಹಾಜರಾತಿ ಮತ್ತು ವೇತನ ಪಡೆದ 2 ವರ್ಷಗಳ ದಾಖಲಾತಿಗಳನ್ನು ಪೌರಾಯುಕ್ತರು/ ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸುವುದು.

8. ಕ್ಷೇಮಾಭಿವೃದ್ಧಿ / ದಿನಗೂಲಿ / ಸಮಾನ ಕೆಲಸಕ್ಕೆ ಸಮಾನ ವೇತನ / ಗುತ್ತಿಗೆ / ಇತರೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ 2 ವರ್ಷಗಳ ಮೇಲ್ಪಟ್ಟು ಕೆಲಸ ನಿರ್ವಹಿಸಿರುವ ಬಗ್ಗೆ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸುವುದು.

9. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ, ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ ಎಫ್‌ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.

10. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ:96: ಸೇನನಿ:2005, ದಿನಾಂಕ:10.08.2005ರ ಪ್ರಕಾರ ನಿಗದಿತ ನಮೂನೆಯಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಪೌರಾಯುಕ್ತರು / ಮುಖ್ಯಾಧಿಕಾರಿಯಿಂದ ಮೇಲೆ ದೃಢೀಕರಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

11. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ:19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ: 115:ಸೇನನಿ: 2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.

12. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ: 44:ಸೇನನಿ: 2001ರ ದಿನಾಂಕ:27.07.2001 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

13. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

## ವಿಶೇಷ ಸೂಚನೆಗಳು:–

- ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಮತ್ತು ಕಡ್ಡಾಯವಾಗಿ ಪೌರಾಯುಕ್ತರು / ಮುಖ್ಯಾಧಿಕಾರಿಯಿಂದ ದೃಢೀಕರಿಸಿರಬೇಕು.

- ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಲ್ಲಿ ತಕ್ಷಣವೇ ಈ ಕಛೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದ್ದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.

- ಅಭ್ಯರ್ಥಿಗಳು ಈ ನೇಮಕಾತಿ ಪ್ರಾಧಿಕಾರ (ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆ) ರವರು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅರ್ಜಿಗಳನ್ನು ಭರ್ತಿ ಮಾಡಿ ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

- ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ–ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.

- ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವರೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತುಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವನ್ನು ರದ್ದುಪಡಿಸಲಾಗುವುದು.

ಸ್ಥಳ : ಬೆಂಗಳೂರು
ದಿನಾಂಕ: 0903.2018

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ,
ಹಾಗೂ ಜಿಲ್ಲಾಧಿಕಾರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ.